ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ವರ್ಷ ಸುರಿದ ಮಳೆಯಿಂದ ಆಗಿರುವ ಹಾನಿಯ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)-

41 (415) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ವರ್ಷ ಸುರಿದ ಧಾರಾಕಾರ ಮಳೆ ಹಾಗೂ ಭೂಕುಸಿತದಿಂದಾಗಿ, ಸುಮಾರು 5 ಸಾವಿರ ಕೋಟಿ ರೂಪಾಯಿಗಳಿಗೂ ಅಧಿಕ ನಷ್ಟ ಸಂಭವಿಸಿ ಜನರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಮಳೆಹಾನಿ ಪರಿಹಾರವಾಗಿ ಇದುವರೆಗೂ ಎಷ್ಟು ಹಣವನ್ನು ಬಿಡುಗಡೆ ಮಾಡಿದೆ;

(ಇ) ಸದರಿ ಬಿಡುಗಡೆಗೊಂಡ ಪರಿಹಾರದ ಹಣದಲ್ಲಿ, ಸಂಕಷ್ಟದಲ್ಲಿರುವ ಜನರಿಗೆ ಸರ್ಕಾರ ಇದುವರೆಗೂ ಕಲ್ಪಿಸಿರುವ ಪರಿಹಾರ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)